**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿ ಪರವಾಗಿ ಶ್ರೀ ಎಸ್.ಟಿ.ಜಿ ವಕೀಲರಿಂದ:**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಗಳನ್ನು ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಪಿ.–1 | ವಂಶವೃಕ್ಷ |
| ನಿ.ಪಿ.–2 | ವಾದಿಯ ತಂದೆಯ ಮರಣ ಪ್ರಮಾಣ ಪತ್ರ |
| ನಿ.ಪಿ.–3 ರಿಂದ 7 | ಪಹಣಿ |
| ನಿ.ಪಿ.–8 ರಿಂದ 10 | ಮ್ಯೂಟೇಷನ್ ಗಳು |
| ನಿ.ಪಿ.–11 | ಮನೆ ತೆರಿಗೆ ರಿಜೇಸ್ಟರ್ |

**ಈ ಹಂತದಲ್ಲಿ ಸಾಕ್ಷಿ ಕಡೆಯಿಂದ ಮತ್ತಷ್ಟು ದಾಖಲೆಗಳನ್ನು ಹಾಜರು ಪಡಿಸುವ ಸಲುವಾಗಿ ವಾದಿ ಪರ ವಕೀಲರು ಕೋರಿದ್ದರಿಂದ ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**